ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1334 (1645) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಮಂಜೂರಾದ ಅನುದಾನವೆಷ್ಟು; ಆ ಪೈಕಿ ಬಿಡುಗಡೆಯಾದ ಅನುದಾನವೆಷ್ಟು ; (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಮಂಡ್ಯ ಜಿಲ್ಲೆಗೆ ವಿವಿಧ ಯೋಜನೆಗಳಡಿಯಲ್ಲಿ ಮಂಜೂರಾದ ಅನುದಾನವೆಷ್ಟು ; (ಆದೇಶದ ಪ್ರತಿಯೊಂದಿಗೆ ವಾರ್ಷಿಕವಾರು ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಮಂಡ್ಯ ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ ಮತ್ತು ಪೂರ್ಣವಾಗದೇ ಇರುವ ಕಾಮಗಾರಿಗಳು ಯಾವುವು ; ಪೂರ್ಣವಾಗದೆ ಇರಲು ಕಾರಣಗಳೇನು ? (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)